**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ ಬಲ್ಕೀಸ್ ಬಾನು ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ**

**ಸೂಚನೆ:**

ಸರ್ಕಾರದ ವಿವಿಧ ಆಯುಷ್ ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ ಗುತ್ತಿಗೆ ಹಾಗೂ ಕನ್ಸಲ್ಟೆಂಟ್ ಸಹಾಯಕ ಪ್ರಾಧ್ಯಾಪಕರುಗಳು ಸುಮಾರು 08 ವರ್ಷಗಳಿಂದ ಕಡಿಮೆ ಸಂಚಿತ ವೇತನದಲ್ಲಿ ಸೇವೆ ಸಲ್ಲಿಸುತ್ತಿದ್ದು, ಯಾವುದೇ ಮುಂಬಡ್ತಿ ಸಿಕ್ಕಿರುವುದಿಲ್ಲ. ಇವರಲ್ಲಿ ಬಹಳಷ್ಟು ಜನರು 45 ವರ್ಷ ಮೇಲ್ಪಟ್ಟ ವಯಸ್ಸಿನವರಾಗಿದ್ದು, ಬೇರೆ ಉದ್ಯೋಗಕ್ಕೆ ಹೋಗಲು ಅನರ್ಹರಾಗುತ್ತಿದ್ದು, ಸಹಾಯಕ ಪ್ರಾಧ್ಯಾಪಕರುಗಳು ಅವಕಾಶಗಳಿಂದ ವಂಚಿತರಾಗಿರುತ್ತಾರೆ.

ಸದರಿ ಗುತ್ತಿಗೆ ಸಹಾಯಕ ಪ್ರಾಧ್ಯಾಪಕರು, ಕರ್ನಾಟಕ ಸರ್ಕಾರದ ವೃಂದ ಮತ್ತು ನೇಮಕಾತಿ ನಿಯಮಗಳು ಒಳಗೊಂಡು ಹಾಗೂ ಶಾಸನಬದ್ಧ ಪ್ರಾಧಿಕಾರಗಳಾದ ಎನ್.ಸಿ.ಐ.ಎಸ್.ಎಮ್. ಮತ್ತು ಎನ್.ಸಿ.ಎಚ್. ರವರು ರಚಿಸಿರುವ ನಾರ್ಮ್ಸ್, ರೀತ್ಯಾ ಪ್ರಕಾರ ತಜ್ಞತೆ, ವಿಷಯಾವಾರು ನೇಮಕಾತಿ ನಿಯಮಗಳನ್ನು ಹೊಂದಿರುತ್ತಾರೆ.

ಸರ್ವೋಚ್ಚ ನ್ಯಾಯಾಲಯವು ಉಮಾದೇವಿ ಪ್ರಕರಣವನ್ನು ಹಾಗೂ ಜಗ್ಗೂ ಮತ್ತು ಭಾರತ ಸರ್ಕಾರದ ನಡುವಿನ ಪ್ರಕರಣವನ್ನು ಉಲ್ಲೇಖಿಸಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವರಿಗೆ ಗುತ್ತಿಗೆ ಸಹಾಯಕ ಪ್ರಾಧ್ಯಾಪಕರುಗಳು ಮನವಿ ಸಲ್ಲಿಸಿದ್ದಾರೆ.

ಸದರಿ ಗುತ್ತಿಗೆ ಸಹಾಯಕ ಪ್ರಾಧ್ಯಾಪಕರುಗಳ ಸೇವೆಯನ್ನು ಸರ್ಕಾರದ ಹಂತದಲ್ಲಿ ಖಾಯಂ ಮಾಡಿರುವ ಉದಾಹರಣೆಗಳಿವೆ. ಖಾಲಿ ಇರುವ ಮತ್ತು ಮಂಜೂರಾದ ಹುದ್ದೆಗಳಲ್ಲಿ ಗುತ್ತಿಗೆ ಸಹಾಯಕ ಪ್ರಾಧ್ಯಾಪಕರು ಸೇವೆ ಸಲ್ಲಿಸಿರುತ್ತಿರುವುದರಿಂದ ಸೇವೆಯನ್ನು ಖಾಯಂಗೊಳಿಸುವುದು ನ್ಯಾಯಸಮ್ಮತವಾಗಿರುತ್ತದೆ. ಸದರಿಯವರು 8 ರಿಂದ 10 ವರ್ಷಗಳಿಂದ ಸೇವೆ ಸಲ್ಲಿಸಿರುವುದರಿಂದ ಇವರನ್ನು ಖಾಯಂಗೊಳಿಸಬೇಕೆಂದು ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಿರುತ್ತಾರೆ.

**ಉತ್ತರ**

ಆಯುಷ್ ಇಲಾಖೆಯ ಅಧೀನದಲ್ಲಿ ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಬೆಂಗಳೂರು/ಮೈಸೂರು/ಶಿವಮೊಗ್ಗ ಮತ್ತು ತಾರನಾಥ ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಬಳ್ಳಾರಿ, ಸರ್ಕಾರಿ ಹೋಮಿಯೋಪತಿ ವೈದ್ಯಕೀಯ ಮಹಾವಿದ್ಯಾಲಯ, ಬೆಂಗಳೂರು, ಸರ್ಕಾರಿ ಯುನಾನಿ ವೈದ್ಯಕೀಯ ಮಹಾವಿದ್ಯಾಲಯ, ಬೆಂಗಳೂರು ಹಾಗೂ ಸರ್ಕಾರಿ ಪ್ರಕೃತಿ ಚಿಕಿತ್ಸೆ & ಯೋಗ ವೈದ್ಯಕೀಯ ಮಹಾವಿದ್ಯಾಲಯ, ಮೈಸೂರು ಈ ಮಹಾವಿದ್ಯಾಲಯಗಳು ಕಾರ್ಯನಿರ್ವಹಿಸುತ್ತಿದ್ದು, ಆಯುಷ್ ಮಹಾವಿದ್ಯಾಲಯ ಗಳಲ್ಲಿ ಬೋಧಕರ ಕೊರತೆ ಇರುವುದರಿಂದ, NCISM ಮಾರ್ಗಸೂಚಿಗಳನ್ವಯ ಮಹಾವಿದ್ಯಾಲಯಗಳನ್ನು ಮುಂದುವರೆಸಲು, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಠಿಯಿಂದ ಹಾಗೂ ಮಹಾವಿದ್ಯಾಲಯದ ಸುಗಮ ಕಾರ್ಯನಿರ್ವಹಣೆಯ ದೃಷ್ಠಿಯಿಂದ ಗುತ್ತಿಗೆ /ಕನ್ಸಲ್‌ಟೆಂಟ್ ಆಧಾರದ ಮೇರೆಗೆ ನೇಮಕಾತಿ ಮಾಡಿಕೊಂಡಿದ್ದು, ಸದರಿಯವರುಗಳನ್ನು ಕರ್ನಾಟಕ ಲೋಕಸೇವಾ ಆಯೋಗದಿಂದ ಹುದ್ದೆಗಳು ಖಾಯಂ ಆಗಿ ಭರ್ತಿ ಮಾಡುವವರೆಗೆ ಅಥವಾ ಕಾಲಕಾಲಕ್ಕೆ ನಿಗದಿಪಡಿಸಿರುವ ಅವಧಿಗೆ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ 02 ದಿನಗಳ ಸೇವಾಭಂಗಗೊಳಿಸಿ ಮುಂದುವರೆಸಲಾಗುತ್ತಿದೆ.

---2

ಈಗಾಗಲೇ ಆಯುಷ್ ಇಲಾಖೆಯಲ್ಲಿ ಸಹಾಯಕ ಪ್ರಾಧ್ಯಾಪಕರು (ಆಯುರ್ವೇದ/ಯುನಾನಿ/ ಹೋಮಿಯೋಪತಿ/ ಪ್ರ.ಚಿ&ಯೋಗ) ವೃಂದದಲ್ಲಿ ಖಾಲಿಯಿರುವ 89 ಹುದ್ದೆಗಳನ್ನು ಭರ್ತಿ ಮಾಡುವ ಕುರಿತ ಪ್ರಸ್ತಾವನೆ ಪರಿಶೀಲನೆಯಲ್ಲಿದೆ. ಖಾಲಿಯಿರುವ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿಮಾಡುವ ಪ್ರಕ್ರಿಯೆ ವಿಳಂಬವಾಗುವ ಹಿನ್ನೆಲೆಯಲ್ಲಿ ಈ ಮಹಾವಿದ್ಯಾಲಯಗಳಲ್ಲಿ (ಆಯುರ್ವೇದ/ಯುನಾನಿ/ ಹೋಮಿಯೋಪತಿ) ಗುತ್ತಿಗೆ/ಕನ್ಸಲ್ಟೆಂಟ್ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಸ್ನಾತಕೋತ್ತರ ಪದವಿ ಪಡೆದಿರುವ 45 ಸಹಾಯಕ ಪ್ರಾಧ್ಯಾಪಕರುಗಳ ಸೇವೆಯನ್ನು ಖಾಯಂಗೊಳಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.

ಸಂಖ್ಯೆ: ಆಕುಕ 92 ಪಿಟಿಡಿ 2025

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು